

ದಿನಾಂಕ: 15-06-2024 ರಂದು ನೂತನ ಸಂಸದರಾಗಿ ಆಯ್ಕೆಯಾದ ಶ್ರೀನಿವಾಸ್ ಕೋಟ ಅವರು ತಮ್ಮ ವಿಧಾನ ಪರಿಷತ್ ಸದಸ್ಯರ ಸ್ಥಾನಕ್ಕೆ ಇಂದು ಸಭಾಪತಿ ಬಸವರಾಜ್ ಹೊರಟ್ಟಿ ಅವರನ್ನು ಭೇಟಿಯಾಗಿ ರಾಜೀನಾಮೆ ಸಲ್ಲಿಸಿದರು. ವಿಧಾನಪರಿಷತ್ ಸದಸ್ಯರಾಗಿ ಸದನದ ಒಳಗೆ ಹೊರಗೆ ಜನಪರ ಕೆಲಸ ಮಾಡಲು ಸಾಕಷ್ಟು ಸಹಕಾರ ಮಾರ್ಗದರ್ಶನ ನೀಡಿದ ಹೊರಟ್ಟಿ ಅವರ ಸೇವೆಯನ್ನ ಈ ಸಂದರ್ಭದಲ್ಲಿ ಸ್ಮರಿಸಿಕೊಂಡರು. ಎಂದಿನಂತೆ ತಮ್ಮ ಸಹಕಾರ ಮಾರ್ದರ್ಶನ ನನಗೆ ಇರಲಿ ಎಂದು ಕೋರಿದರು. ಸಭಾಪತಿ ಬಸವರಾಜ್ ಹೊರಟ್ಟಿ ಅವರು ರಾಜೀನಾಮೆಯನ್ನು ಸ್ವೀಕರಿಸಿ ಮಾತನಾಡಿ ಸಂಸದರಾಗಿ ಆಯ್ಕೆಯಾಗಿದ್ದಕ್ಕೆ ಶುಭ ಹಾರೈಸಿ ತಮ್ಮ ಮೂಲಕ ರಾಜ್ಯಕ್ಕೆ ಸಾಕಷ್ಟು ಅಭಿವೃದ್ಧಿ ಕೆಲಸಗಳು ಆಗಲಿ ಎಂದು ಹೇಳಿ ಅಭಿನಂದನೆಗಳನ್ನು ಸಲ್ಲಿಸಿದರು. ಈ ಸಂದರ್ಭದಲ್ಲಿ ವಿಧಾನಪರಿಷತ್ತಿನ ವಿರೋಧ ಪಕ್ಷದ ಸಚೇತಕರಾದ ಎನ್ ರವಿ .ಕುಮಾರ್ ಶಿರಹಟ್ಟಿ ಶಾಸಕರಾದ ಡಾ. ಚಂದ್ರು .ಲಮಾಣಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.